# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ವಿ. ಶರಣಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹುಣಸಮಾರನಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು (ಪ್ರಸ್ತುತ ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಿದ್ದ ಆದೇಶವನ್ನು ಕೆಎಟಿ ಅರ್ಜಿ ಸಂಖ್ಯೆ: 5106/2018ರಲ್ಲಿನ ತೀರ್ಪಿನನ್ವಯ ಹಿಂಪಡೆಯುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 119 ವಿಸೇಬಿ 2017, ದಿನಾಂಕ: 15.06.2017.
2) ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ದೋಷಾರೋಪಣೆ ಪಟ್ಟಿ ಸಂಖ್ಯೆ: ಉಪಲೋಕ್-1/ಡಿಇ/838/2017/ಎಆರ್ಇ-4, ದಿನಾಂಕ: 16.09.2017.
3) ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 5106/2018ರಲ್ಲಿ ದಿನಾಂಕ: 10.06.2021ರಂದು ನೀಡಿರುವ ಆದೇಶ.

*****

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರು ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12 (3) ರಡಿಯಲ್ಲಿ ಸಲ್ಲಿಸಿರುವ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಬೆಂಗಳೂರು ನಗರ ಜಿಲ್ಲೆ ಬೆಂಗಳೂರು ಉತ್ತರ ತಾಲ್ಲೂಕಿನ ಹುಣಸಮಾರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಸರ್ವೆ ನಂ. 186ರ ಜಮೀನು ಮೂಲತಃ ವ್ಯವಸಾಯ ಮತ್ತು ಹಸಿರು ಪಟ್ಟಿ ವಲಯಕ್ಕೆ ಸಂಬಂಧಿಸಿದ ಜಮೀನಾಗಿದ್ದು, ಸದರಿ ಜಮೀನಿನಲ್ಲಿ ಕಾನೂನು ಬಾಹಿರವಾಗಿ ಭೂ ಪರಿವರ್ತನೆ ಆದೇಶವಿಲ್ಲದೇ ಬಡಾವಣೆ ನಿರ್ಮಿಸಲು ನಮೂನೆ-11ಬಿ ಖಾತೆಯನ್ನು ನಿಯಮಗಳಲ್ಲಿ ಅವಕಾಶವಿಲ್ಲದಿದ್ದರೂ ವಿತರಣೆ ಮಾಡಿರುತ್ತಾರೆ ಮತ್ತು ಒಳಚರಂಡಿ ನಿರ್ಮಿಸುವ ಕಾಮಗಾರಿಯಲ್ಲಿ ಅವ್ಯವಹಾರ ನಡೆಸಿದ್ದಾರೆಂಬ ಆರೋಪದ ಮೇಲೆ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಕ.ಲೋ.ಕಾ, 1984ರ ಕಲಂ 9 ರಡಿ ತನಿಖೆ ಕೈಗೊಂಡು, ಸದರಿ ಅಧಿಕಾರಿಗಳ ವಿರುದ್ಧ ವಿಚಾರಣೆ ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವ, ನಿ &ಮೇ) 1957ರ ನಿಯಮ 14-ಎ ರನ್ವಯ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಲೋಕಾಯುಕ್ತ ಸಂಸ್ಥೆಗೆ ವಹಿಸುವಂತೆ ಕೋರಿದ್ದರು.

1) ಶ್ರೀ ಶರಣಪ್ಪ (ಪ್ರಸ್ತುತ ನಿವೃತ್ತ), ಹುಣಸಮಾರಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
2) ಶ್ರೀ ಚನ್ನಪ್ಪ, ಕಾರ್ಯದರ್ಶಿ, ಹುಣಸಮಾರನಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
3) ಶ್ರೀ ಬಾಬು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು.

..2

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಆಪಾದಿತ ಅಧಿಕಾರಿ/ ನೌಕರರು ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡು ಸರ್ಕಾರಕ್ಕೆ ವಂಚಿಸಿರುವ ಆರೋಪಗಳು ಪ್ರಾಥಮಿಕ ತನಿಖೆಯಿಂದ ದೃಢಪಟ್ಟಿದ್ದರಿಂದ, ಸದರಿ ಅಧಿಕಾರಿ/ ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಕೈಗೊಳ್ಳಲು ನಿರ್ಧರಿಸಿ, ಕ.ನಾ.ಸೇ (ವ, ನಿ & ಮೇ) ನಿಯಮಗಳು, 1957ರ ನಿಯಮ 11ರನ್ವಯ ಇಲಾಖಾ ವಿಚಾರಣೆ ನಡೆಸಲು ಶ್ರೀ ವಿ.ಶರಣಪ್ಪ (ನಿವೃತ್ತ) ಇವರಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1958ರ ನಿಯಮ 214 (2) (ಬಿ) (i) ರನ್ವಯ ಅನುಮತಿ ನೀಡಿ, ಸದರಿಯವರು ಸೇರಿದಂತೆ ಉಳಿದ ಅಧಿಕಾರಿ/ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕ.ನಾ.ಸೇ (ವ, ನಿ & ಮೇ) ನಿಯಮಗಳು, 1957ರ ನಿಯಮ 14 (ಎ) ರಡಿ ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಿ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಅದರನ್ವಯ ಮಾನ್ಯ ಉಪ ಲೋಕಾಯುಕ್ತರವರು ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದರ ಮೇರೆಗೆ ಸದರಿ ವಿಚಾರಣಾಧಿಕಾರಿಯವರು ಆಪಾದಿತ ಅಧಿಕಾರಿ/ ನೌಕರರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದೋಷರೋಪಣಾ ಪಟ್ಟಿಯನ್ನು ಜಾರಿ ಮಾಡಿರುತ್ತಾರೆ.

ಏತನ್ಮಧ್ಯೆ, ಶ್ರೀ ವಿ.ಶರಣಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರು ಪ್ರಕರಣವನ್ನು ವಿಚಾರಣೆಗಾಗಿ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಿದ್ದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 119 ವಿಸೇಬಿ 2017, ದಿನಾಂಕ: 15.06.2017 ಮತ್ತು ಅದರನ್ವಯ ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಇವರು ಜಾರಿಗೊಳಿಸಿರುವ ದಿನಾಂಕ: 16.09.2017ರ ದೋಷಾರೋಪಣೆ ಪಟ್ಟಿಯನ್ನು ಪ್ರಶ್ನಿಸಿ, ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿ ಸಂಖ್ಯೆ: 5106/2018ನ್ನು ದಾಖಲಿಸಿದ್ದರು. ಸದರಿ ಅರ್ಜಿಯ ವಿಚಾರಣೆಯನ್ನು ನಡೆಸಿರುವ ಮಾನ್ಯ ನ್ಯಾಯಮಂಡಳಿಯು ದಿನಾಂಕ: 10.06.2021ರಂದು ಅರ್ಜಿಯನ್ನು ಪುರಸ್ಕರಿಸಿ, ಈ ಕೆಳಕಂಡಂತೆ ತೀರ್ಪು ನೀಡಿರುತ್ತದೆ.

> *"...Accordingly, the application is allowed and the impugned order bearing No. ಗ್ರಾಅಪ 119 ವಿಸೇಬಿ 2017 dated 15.06.2017 issued by respondent No.1 and produced vide Annexure-A8 and the charge memo bearing No. Upalok-1/DE/838/2017/ARE-4 dated 16.09.2017 issued by Respondent No.2 and produced vide Annexure A9, so far as they relate to the applicant, are hereby set aside."*

ಮಾನ್ಯ ನ್ಯಾಯಮಂಡಳಿಯ ಆದೇಶದನ್ವಯ ಪರಿಶೀಲಿಸಲಾಗಿ, ದಿನಾಂಕ: 10.06.2021ರ ಆದೇಶದಲ್ಲಿ ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ, ಶ್ರೀ ಶರಣಪ್ಪ.ವಿ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರು ಕೆಎಟಿಯಲ್ಲಿ ದಾಖಲಿಸಿದ್ದ ಅರ್ಜಿ ಸಂಖ್ಯೆ: 5106/2018ನ್ನು ಪುರಸ್ಕರಿಸಿ, ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 119 ವಿಸೇಬಿ 2017, ದಿನಾಂಕ: 15.06.2017 ಮತ್ತು ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಇವರು ಜಾರಿಗೊಳಿಸಿರುವ ದಿನಾಂಕ: 16.09.2017ರ ದೋಷಾರೋಪಣೆ ಪಟ್ಟಿಯನ್ನು ತಳ್ಳಿಹಾಕಿ ಆದೇಶಿಸಿರುತ್ತದೆ.

- ಬೆಂಗಳೂರು ಉತ್ತರ ತಾಲ್ಲೂಕು, ಹುಣಸಮಾರನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಸದರಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಹೊಸಹಳ್ಳಿ ಗ್ರಾಮವನ್ನು ಹೊರತುಪಡಿಸಿ ಉಳಿದ ಎಲ್ಲಾ ಹಸಿರು ವಲಯಕ್ಕೆ ಒಳಪಟ್ಟ ಗ್ರಾಮಗಳಲ್ಲಿ ಸುಮಾರು 387 ನಮೂನೆ 11-ಬಿಗಳನ್ನು ನಿಯಮಬಾಹಿರವಾಗಿ ವಿತರಿಸಿರುವ ಅದೇ ಆರೋಪಗಳ ಕುರಿತು ಈ ಹಿಂದೆ ಜಿಲ್ಲಾ ಪಂಚಾಯಿತಿ ಹಂತದಲ್ಲಿ ಶ್ರೀ ಶರಣಪ್ಪ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಂಡು, ವಿಚಾರಣಾಧಿಕಾರಿಗಳು ಸಲ್ಲಿಸಿದ್ದ ವರದಿಯನ್ನು ಪರಿಶೀಲಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಇವರು ಆದೇಶ ಸಂಖ್ಯೆ: ಆಡಳಿತ (1)ಸಿಸಿಎ-34/2015-16, ದಿನಾಂಕ: 18.10.2016ರಲ್ಲಿ, ಸದರಿಯವರನ್ನು ಆರೋಪಮುಕ್ತಗೊಳಿಸಿ ಆದೇಶಿಸಲಾಗಿದೆ.

- ಅದೇ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಿಂದ ಎರಡನೇ ಬಾರಿಗೆ ಇಲಾಖಾ ವಿಚಾರಣೆಯನ್ನು ನಡೆಸಲು ಕ್ರಮವಹಿಸಲಾಗಿದೆ. ಈಗಾಗಲೇ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಇವರ ಆದೇಶದಲ್ಲಿ ಇದೇ ಆರೋಪಗಳಿಂದ ಅರ್ಜಿದಾರರನ್ನು ಆರೋಪಮುಕ್ತಗೊಳಿಸಿ ಆದೇಶಿಸಿರುವುದರಿಂದ, ಅರ್ಜಿದಾರರ ವಿರುದ್ಧ ಒಂದೇ ಆರೋಪಕ್ಕೆ ಎರಡನೇ ವಿಚಾರಣೆ ನಡೆಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಹಾಗೂ ಎರಡನೇ ವಿಚಾರಣೆ ನಡೆಸಲು ಕಾನೂನಿನನ್ವಯ ಅನುಮತಿಸಲಾಗುವುದಿಲ್ಲವೆಂದು ನಿರ್ಣಯಿಸಿ ಮಾನ್ಯ ನ್ಯಾಯಾಲಯದ UNION OF INDIA AND ANOTHER vs KUNISHETTY SATYANARAYANA [(2006) 12 SCC 28] ಆದೇಶವನ್ನು ಉಲ್ಲೇಖಿಸಿ, ಅರ್ಜಿದಾರರ ಅರ್ಜಿಯನ್ನು ಪುರಸ್ಕರಿಸಿ ಆದೇಶಿಸಿರುತ್ತದೆ.

ಘನ ನ್ಯಾಯಮಂಡಳಿಯ ಆದೇಶವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಶರಣಪ್ಪ.ವಿ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರು ಕೆ.ಎ.ಟಿಯಲ್ಲಿ ದಾಖಲಿಸಿದ್ದ ಅರ್ಜಿ ಸಂಖ್ಯೆ: 5106/2018ನ್ನು ಪುರಸ್ಕರಿಸಿ, ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 119 ವಿಸೇಬಿ 2017, ದಿನಾಂಕ: 15.06.2017 ಮತ್ತು ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಇವರಿಂದ ಹೊರಡಿಸಲ್ಪಟ್ಟಿರುವ ದೋಷಾರೋಪಣೆ ಪಟ್ಟಿ ದಿನಾಂಕ: 16.09.2017ನ್ನು ತಳ್ಳಿಹಾಕಿ ಆದೇಶಿಸಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ನಿಯಮ 214 (2) (ಬಿ) (i) ರನ್ವಯ ಸಹಮತಿ ನೀಡಿ, ಪ್ರಕರಣವನ್ನು ಕ.ನಾ.ಸೇ (ವ,ನಿ&ಮೇ) ನಿಯಮಗಳು, 1957ರ ನಿಯಮ 14(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಿದ್ದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 119 ವಿಸೇಬಿ 2017, ದಿನಾಂಕ: 15.06.2017ನ್ನು ಹಿಂಪಡೆಯಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಮುಂದಿನ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 195 ವಿಸೇಬಿ 2018, ದಿನಾಂಕ: 27.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, **ಶ್ರೀ ವಿ.ಶರಣಪ್ಪ,** ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹುಣಸಮಾರಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ (ಪ್ರಸ್ತುತ ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ನಿಯಮ 214 (2) (ಬಿ) (i) ರನ್ವಯ ಸಹಮತಿ ನೀಡಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲಾಗಿದ್ದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 119 ವಿಸೇಬಿ 2017, ದಿನಾಂಕ: 15.06.2017ನ್ನು **ಇವರಿಗೆ ಸಂಬಂಧಿಸಿದಂತೆ ಮಾತ್ರ ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು** ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/04/2022
**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
27/4/2022

<u>ಇವರಿಗೆ,</u>

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
3. ಅಪರ ನಿಬಂಧಕರು (ವಿಚಾರಣೆಗಳು-4), ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ.
5. ಆಪಾದಿತ ಅಧಿಕಾರಿ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ಇವರ ಮುಖಾಂತರ).
6. ಸರ್ಕಾರಿ ವಕೀಲರು, ಅಡ್ವೋಕೇಟ್ ಜನರಲ್‌ರವರ ಕಛೇರಿ, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿ ಮಾಹಿತಿಗಾಗಿ:</u>

3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

*****